# <u>ಕರ್ನಾಟಕ ಸರ್ಕಾರದ ನಡವಳಿಗಳು</u>

**ವಿಷಯ:** ಡಾ॥ ಡಿ.ಎಂ. ನಂಜುಂಡಪ್ಪ ವರದಿ ಆಧಾರಿತ ರಾಜ್ಯದ ಹಿಂದುಳಿದ ತಾಲ್ಲೂಕುಗಳಿಗೆ ವಿಶೇಷ ಅಭಿವೃದ್ಧಿ ಕಾರ್ಯಕ್ರಮ (SDP) ಯೋಜನೆಯಡಿ ಗ್ರಾಮೀಣ ಕುಡಿಯುವ ನೀರು ಪೂರೈಕೆಗಾಗಿ **2018-19ನೇ** ಸಾಲಿನಲ್ಲಿ ಅನುದಾನ ಬಿಡುಗಡೆ ಮಾಡುವ ಕುರಿತು.

**ಓದಲಾಗಿದೆ:** 1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/48/ಗ್ರಾಕುನೀ&ನೈಇ/ಲೆಶಾ/2018-19, ಬೆಂಗಳೂರು, ದಿನಾಂಕ 05-04-2018.

**<u>ಪೀಠಿಕೆ:</u>**

ಮೇಲೆ ಓದಲಾದ ಉಲ್ಲೇಖದಲ್ಲಿ ರಾಷ್ಟ್ರೀಯ ಗ್ರಾಮೀಣ ಕುಡಿಯುವ ನೀರು ಯೋಜನೆಯಡಿ 2018-19ನೇ ಸಾಲಿನ ಆಯವ್ಯಯದಲ್ಲಿ ಲೆಕ್ಕ ಶೀರ್ಷಿಕೆ 2215-01-102-9-08 ಅಡಿ ಒಟ್ಟು ರೂ.220000.00 ಲಕ್ಷಗಳನ್ನು ನಿಗಧಿಪಡಿಸಲಾಗಿದ್ದು, ಸದರಿ ಅನುದಾನದಲಿ ರಾಜ್ಯದ ಪಾಲಿನ ಮೊದಲನೇ ಕಂತಿನ ಅನುದಾನ ರೂ.39303.00.00 ಲಕ್ಷಗಳನ್ನು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಗೆ ಈಗಾಗಲೇ ಬಿಡುಗಡೆಗೊಳಿಸಲಾಗಿರುತ್ತದೆ.

ಮುಂದುವರೆದು, ಸದರಿ **ಮೊದಲನೇ ಕಂತಿನ ಅನುದಾನ** ರೂ.39303.00 ಲಕ್ಷಗಳ ರಾಜ್ಯದ ಪಾಲಿನ ಅನುದಾನದಲ್ಲಿ ಪ್ರಸ್ತುತ ಗ್ರಾಮೀಣ ಕುಡಿಯುವ ನೀರು ಯೋಜನೆಯ ವಿಶೇಷ ಅಭಿವೃದ್ಧಿ ಕಾರ್ಯಕ್ರಮ (SDP) ಯೋಜನೆ ಲೆಕ್ಕ ಶೀರ್ಷಿಕೆ 2215-01-102-9-08-133 ಅಡಿ ರೂ.1456.00 ಲಕ್ಷಗಳ ಅನುದಾನವನ್ನು ರಾಜ್ಯದ ಹಿಂದುಳಿದ ತಾಲ್ಲೂಕಿಗೆ ಬಿಡುಗಡೆ ಮಾಡಲು ಇಲಾಖೆಯು ನಿರ್ಧರಿಸಿದೆ. ಆದ್ದರಿಂದ ಈ ಕೆಳಕಂಡ ಆದೇಶ.

**<u>ಸರ್ಕಾರದ ಆದೇಶ ಸಂ.ಗ್ರಾಅಪ/48/ಗ್ರಾಕುನೀ&ನೈಇ/ಲೆಶಾ/2017-18, ಬೆಂಗಳೂರು, ದಿನಾಂಕ 18-05-2018</u>**

ಪೀಠಿಕೆಯಲ್ಲಿನ ಉದ್ದೇಶಿತ ಗ್ರಾಮೀಣ ನೀರು ಪೂರೈಕೆ ಕಾರ್ಯಕ್ರಮಗಳ ಅನುಷ್ಠಾನ ಸಲುವಾಗಿ ಡಾ॥ ಡಿ.ಎಂ. ನಂಜುಂಡಪ್ಪ ವರದಿ ಆಧಾರಿತ ಹಿಂದುಳಿದ ತಾಲ್ಲೂಕುಗಳಿಗೆ **ವಿಶೇಷ ಅಭಿವೃದ್ಧಿ ಕಾರ್ಯಕ್ರಮ (SDP)** ಯೋಜನೆಯಡಿ ರಾಜ್ಯದ ಪಾಲಿನ ರೂ.1456.00 ಲಕ್ಷಗಳ (ಒಂದು ಸಾವಿರದ ಒಂದು ನೂರ ಐವತ್ತಆರು ಲಕ್ಷಗಳು ಮಾತ್ರ) ಅನುದಾನವನ್ನು ಅನುಬಂದದಲ್ಲಿರುವಂತೆ ರಾಜ್ಯದ ಬೆಂಗಳೂರು (ನ), ಚಾಮರಾಜನಗರ, ಚಿಕ್ಕಬಳ್ಳಾಪುರ, ಚಿರ್ತದುರ್ಗ, ಗದಗ, ಹಾವೇರಿ, ಕೋಲಾರ ಹಾಗೂ ಕೊಪ್ಪಳ ಜಿಲ್ಲೆಯ ಹಿಂದುಳಿದ ತಾಲ್ಲೂಕುಗಳಿಗೆ ಬಿಡುಗಡೆ ಮಾಡಲು ಸರ್ಕಾರವು ಹರ್ಷಿಸುತ್ತದೆ.

2. ಮೇಲ್ಕಂಡ ಅನುದಾನವನ್ನು ಗ್ರಾಮೀಣ ನೀರು ಪೂರೈಕೆ ಬಾಬ್ತಿನ ಬೇಡಿಕೆಗಳ ಸಂಬಂಧ NRDWP ಮಾರ್ಗಸೂಚಿಗಳನ್ವಯ IMIS ನಲ್ಲಿ ದಾಖಲಾಗಿರುವ **ವಿಶೇಷ ಅಭಿವೃದ್ಧಿ ಕಾರ್ಯಕ್ರಮ (SDP)** ಯೋಜನೆಯಡಿ ಅನುಮೋದಿತ ಕ್ರಿಯಾಯೋಜನೆಗೆ ಆಯಾ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗಗಳು ರಾಜ್ಯ ವಲಯದ ಲೆಕ್ಕ ಶೀರ್ಷಿಕೆ 2215-01-102-9-08-133 ಅಡಿ RTGS ಮುಖೇನ ಈಗಾಗಲೇ ಗೊತ್ತುಪಡಿಸಿರುವ SWSM ಬ್ಯಾಂಕ್ ಮೂಲ ಉಳಿತಾಯ ಖಾತೆ ಸಂಖ್ಯೆ: 04462010091577 ಮುಖಾಂತರ ವಿನಿಯೋಗಿಸತಕ್ಕದ್ದು.

3. ಸಂಬಂಧಿಸಿದ ವಿಭಾಗಗಳು ಆರ್.ಟಿ.ಜಿ.ಎಸ್. ನೊಂದಿಗೆ ಕಡ್ಡಾಯವಾಗಿ ಗಾಂಧಿ ಸಾಕ್ಷಿ ಕಾಯಕ ಪಾವತಿ ಆದೇಶವನ್ನು ಬ್ಯಾಂಕಿಗೆ ಸಲ್ಲಿಸತಕ್ಕದ್ದು. ಯಾವುದೇ ಕಾರಣಕ್ಕೂ ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಕಾಮಗಾರಿಗಳ ವಿವರವನ್ನು ಅಳವಡಿಸದೆ ಹಾಗೂ ಗಾಂಧಿ ಸಾಕ್ಷಿ ಕಾಯಕ ಪಾವತಿ ಆದೇಶವಿಲ್ಲದೆ ಬಿಲ್ಲುಗಳನ್ನು ಸಲ್ಲಿಸತಕ್ಕದ್ದಲ್ಲ. ಹಾಗೂ ಬ್ಯಾಂಕ್‌ನವರು ಪಾವತಿಸತಕ್ಕದ್ದಲ್ಲ.

4. ಕಾರ್ಯಪಾಲಕ ಅಭಿಯಂತರರು, ಗ್ರಾ.ಕು.ನೀ.&.ನೈ. ವಿಭಾಗದವರು IMIS ನಲ್ಲಿ ವೆಚ್ಚ ದಾಖಲಿಸಬೇಕು. ಇದನ್ನು ಜಿಲ್ಲಾ ಪಂಚಾಯತಿಗಳ ಮುಖ್ಯ ಲೆಕ್ಕಾಧಿಕಾರಿಗಳು ಪರಿವೀಕ್ಷಿಸಿ ದೃಢೀಕರಿಸತಕ್ಕದ್ದು.

5. ಈ ಆದೇಶದಲ್ಲಿ ಬಿಡುಗಡೆ ಮಾಡಲಾಗುತ್ತಿರುವ ಅನುದಾನವನ್ನು ಕರ್ನಾಟಕ ಪಾರದರ್ಶಕ ಕಾಯ್ದೆ-1999 ಮತ್ತು ಕರ್ನಾಟಕ ಪಾರದರ್ಶಕ ನಿಯಮಗಳು-2000, ಕರ್ನಾಟಕ ಆರ್ಥಿಕ ಸಂಹಿತೆ-1958 ಹಾಗೂ ಚಾಲ್ತಿ ಇರುವ ಇಲಾಖಾ ಇತರೆ ನಿಯಮಗಳು / ಕಾಯ್ದೆಗಳನ್ವಯ ಖರ್ಚು ಭರಿಸತಕ್ಕದ್ದು.

6. ಅನುಮೋದಿತ ಯೋಜನೆಗಳ ಕಾಮಗಾರಿಗಳನ್ನು ಉತ್ತಮ ಗುಣಮಟ್ಟದಲ್ಲಿ ಅನುಷ್ಠಾನಗೊಳಿಸಿ, ಯೋಜನೆಗಳನ್ನು ಆದ್ಯತೆ ಮೇಲೆ ಕಾರ್ಯಗತಗೊಳಿಸತಕ್ಕದ್ದು. ಆಯಾ ಯೋಜನೆಗಳ ಅನುಮೋದಿತ ಅಂದಾಜು ವೆಚ್ಚದೊಳಗೆ, ಉದ್ದೇಶಿತ ಯೋಜನಾ ಕಾಮಗಾರಿಗಳನ್ನು ಕಾಲಮಿತಿಯೊಳಗೆ ಯಶಸ್ವಿಯಾಗಿ ಪೂರ್ಣಗೊಳಿಸತಕ್ಕದ್ದು.

7. ಈ ಆದೇಶದಲ್ಲಿ ರಾಜ್ಯ ವಲಯದ ವಿಶೇಷ ಅಭಿವೃದ್ಧಿ ಕಾರ್ಯಕ್ರಮ (SDP) ಯೋಜನೆಯಡಿ ಬಿಡುಗಡೆಯಾಗಿರುವ ರೂ.5000.00 ಲಕ್ಷಗಳ ಅನುದಾನವನ್ನು ಲೆಕ್ಕ ಶೀರ್ಷಿಕೆ 2215-01-102-9-08-133 (2016-17 ಯೋಜನೆ) ಅಡಿ, ಆಯುಕ್ತರು, RDW&SD ರವರ ಮೇಲುರುಜುವಿನೊಂದಿಗೆ Payees Receipt ಮೇಲೆ ಖಜಾನೆಯಿಂದ ತೆಗೆದು ಕೇಂದ್ರ ಸರ್ಕಾರಕ್ಕೆ ಅಧಿಕೃತವಾಗಿ ಘೋಷಿಸಿರುವ ಸಿಂಡಿಕೇಟ್ ಬ್ಯಾಂಕ್ ಉಳಿತಾಯ ಖಾತೆ ಸಂಖ್ಯೆ: 04462010091577ಗೆ ರಾಜ್ಯದ ಪಾಲಾಗಿ ಜಮೆ ಮಾಡಲಾಗಿರುತ್ತದೆ.

8. ರಾಜ್ಯ ಮಟ್ಟದಲ್ಲಿರುವ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ SWSM ನ ಮೂಲ ಉಳಿತಾಯ ಖಾತೆ ಸಂಖ್ಯೆ: 04462010091577 ಯಿಂದ ಸಂಬಂಧಪಟ್ಟ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಲೆಕ್ಕಾಧಿಕಾರಿಗಳ ಮೇಲುರುಜುವಿನೊಂದಿಗೆ ಆಯಾ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗಗಳು **ವಿಶೇಷ ಅಭಿವೃದ್ಧಿ ಕಾರ್ಯಕ್ರಮ** ಯೋಜನೆಯಡಿ ಕಳುಹಿಸುವ ಬಿಲ್ಲುಗಳನ್ನು ಈ ಆದೇಶದಲ್ಲಿ ಸಂಬಂಧಿಸಿದ ಜಿಲ್ಲಾವಾರು / ತಾಲ್ಲೂಕುವಾರು ಬಿಡುಗಡೆ ಮಾಡಿರುವ ಅನುದಾನದ ಮಿತಿಯೊಳಗೆ ಮಾನ್ಯ ಮಾಡಲು ಸಿಂಡಿಕೇಟ್ ಬ್ಯಾಂಕ್ – ರಾಜ್ಯ ಮಟ್ಟದಲ್ಲಿ ಕ್ರಮವಹಿಸತಕ್ಕದ್ದು.

9. ಈ ಆದೇಶದಲ್ಲಿ ರಾಜ್ಯ ವಲಯದ ವಿಶೇಷ ಅಭಿವೃದ್ಧಿ ಕಾರ್ಯಕ್ರಮ (SDP) ಯೋಜನೆಯಡಿ ಬಿಡುಗಡೆಯಾಗಿರುವ ಅನುದಾನವನ್ನು SDP ತಾಲ್ಲೂಕುಗಳಲ್ಲಿ ಅನುಮೋದಿತಗೊಂಡಿರುವ ಶುದ್ಧ ಕುಡಿಯುವ ನೀರು ಘಟಕದ ಬಿಲ್ಲುಗಳಿಗೆ ಪ್ರಥಮಾಧ್ಯತೆ ಮೇಲೆ ಪಾವತಿಸತಕ್ಕದ್ದು.

10. ಮೇಲ್ಕಂಡ ಅನುದಾನವನ್ನು ಈಗಾಗಲೇ ಅನುಮೋದನೆಯಾಗಿ ಕ್ರಿಯಾ ಯೋಜನೆಯಡಿ ಸೇರ್ಪಡಿಸಲ್ಪಟ್ಟಿರುವ ಮುಂದುವರಿದಿರುವ / ಪೂರ್ಣಗೊಂಡಿರುವ / ಪೂರ್ಣಗೊಳಿಸಬೇಕಾಗಿರುವ ಕುಡಿಯುವ ನೀರಿನ ಯೋಜನೆಗಳ ಸಲುವಾಗಿ ಮಾತ್ರ ವಿನಿಯೋಗಿಸತಕ್ಕದ್ದು.

11. ಮುಖ್ಯ ಲೆಕ್ಕಾಧಿಕಾರಿಗಳು, ಗ್ರಾ.ಕು.ನೀ.&.ನೈ. ಇಲಾಖೆ ಪ್ರಸ್ತುತ ಬಿಡುಗಡೆ ಮಾಡುತ್ತಿರುವ ಅನುದಾನವನ್ನು IMIS ನಲ್ಲಿ ಇಂದೀಕರಿಸತಕ್ಕದ್ದು.

12. ಆಯಾಯ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗಗಳು ಪ್ರಸ್ತುತ ಬಿಡುಗಡೆ ಮಾಡುತ್ತಿರುವ ಅನುದಾನಕ್ಕೆದುರಾಗಿ ಭೌತಿಕ ಹಾಗೂ ಆರ್ಥಿಕ ಪ್ರಗತಿಯನ್ನು IMIS ನಲ್ಲಿ ಪ್ರತಿ ಮಾಹೆ 10ನೇ ದಿನಾಂಕದೊಳಗೆ ಇಂದೀಕರಿಸತಕ್ಕದ್ದು. ಹಾಗೂ ಮುಖ್ಯ ಇಂಜಿನಿಯರ್, ಗ್ರಾ.ಕು.ನೀ.&.ನೈ. ಇಲಾಖೆ ಇವರು ಆಯಾಯ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗಗಳು IMIS ನಲ್ಲಿ ಇಂದೀಕರಿಸಿದ ಮಾಹಿತಿಯನ್ನು ಪರಿಶೀಲಿಸತಕ್ಕದ್ದು.

13. ಈ ಆದೇಶದಲ್ಲಿ ಬಿಡುಗಡೆ ಮಾಡಲಾದ ಅನುದಾನವನ್ನು ಯಾವುದೇ ಕಾರಣದಲ್ಲೂ ಇತರೆ ಘಟಕದಡಿ ವರ್ಗಾಯಿಸಿ ಉಪಯೋಗಿಸಿಕೊಳ್ಳದಂತೆ ಕ್ರಮ ವಹಿಸತಕ್ಕದ್ದು. ಕಾಮಗಾರಿಗಳ ಆರ್ಥಿಕ ಮತ್ತು ಭೌತಿಕ ಪ್ರಗತಿಯನ್ನು ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಮೇಲುಸ್ತುವಾರಿ ಮಾಡಿ ವರದಿ ಮಾಡತಕ್ಕದ್ದು.

14. ಆಯಾ ಜಿಲ್ಲಾ ಪಂಚಾಯತ್‌ಗಳು **ವಿಶೇಷ ಅಭಿವೃದ್ಧಿ ಕಾರ್ಯಕ್ರಮ** ಯೋಜನೆಯಡಿ ಕಾಮಗಾರಿಗಳ ಅನುಷ್ಠಾನದ ಭೌತಿಕ ಹಾಗೂ ಆರ್ಥಿಕ ಪ್ರಗತಿಯನ್ನು ಪರಿಶೀಲಿಸಿ 31ನೇ ಮಾರ್ಚ್ 2019ರೊಳಗೆ ವರದಿ ಮಾಡತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

19/05

ಆಯುಕ್ತರು ಹಾಗೂ
ಸರ್ಕಾರದ ಪದನಿಮಿತ್ತ ಕಾರ್ಯದರ್ಶಿ,
ಗ್ರಾ. ಕು. ನೀ. &. ನೈ. ಇಲಾಖೆ, ಬೆಂಗಳೂರು

18/05

**ಪ್ರತಿಗಳು:**

1. ಮಹಾಲೇಖಪಾಲರು (ಲೆಕ್ಕಪತ್ರ), ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು-1), ಕರ್ನಾಟಕ, ಬೆಂಗಳೂರು.

3. ಮಹಾಲೇಖಪಾಲರು (ಎಯು-2), ಕರ್ನಾಟಕ, ಬೆಂಗಳೂರು.
4. ಉಪ ಮಹಾಲೇಖಪಾಲರು, ಮಹಾಲೇಖಪಾಲರು (ಎಯು-1) ರವರ ಶಾಖಾ ಕಛೇರಿ, ಕಾಲೇಜು ರಸ್ತೆ, ಧಾರವಾಡ.
5. ಮುಖ್ಯ ಇಂಜಿನಿಯರ್, ಗ್ರಾ.ಕು.ನೀ.&.ನೈ. ಇಲಾಖೆ, 1ನೇ ಮಹಡಿ, ಕೆ.ಹೆಚ್.ಬಿ. ಕಟ್ಟಡ, ಕಾವೇರಿಭವನ, ಬೆಂಗಳೂರು.
6. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
7. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
8. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
9. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಯೋಜನಾ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬೆಂಗಳೂರು.
10. ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ (ಪಂ.ರಾಜ್), ಗ್ರಾ. ಅ. ಮತ್ತು ಪಂ. ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು.
11. ವಿಶೇಷಾಧಿಕಾರಿ (ಜಿಪಂ) ಹಾಗೂ ಸರ್ಕಾರದ ಪದನಿಮಿತ್ತ ಉಪಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು
12. ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ (6) (ಜಿಪಂ) ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
13. ಮುಖ್ಯ ಲೆಕ್ಕಾಧಿಕಾರಿಗಳು, RDW&SD ಕೇಂದ್ರ ಕಛೇರಿ, ಬೆಂಗಳೂರು.
14. ಅಧ್ಯಕ್ಷರು, ಜಿಲ್ಲಾ ಪಂಚಾಯತ್, ಬೆಂಗಳೂರು (ನ), ಚಾಮರಾಜನಗರ, ಚಿಕ್ಕಬಳ್ಳಾಪುರ, ಚಿತ್ರದುರ್ಗ, ಗದಗ, ಹಾವೇರಿ, ಕೋಲಾರ ಹಾಗೂ ಕೊಪ್ಪಳ ಜಿಲ್ಲೆಗಳು
15. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಬೆಂಗಳೂರು (ನ), ಚಾಮರಾಜನಗರ, ಚಿಕ್ಕಬಳ್ಳಾಪುರ, ಚಿತ್ರದುರ್ಗ, ಗದಗ, ಹಾವೇರಿ, ಕೋಲಾರ ಹಾಗೂ ಕೊಪ್ಪಳಜಿಲ್ಲೆಗಳು
16. ಮುಖ್ಯ ಲೆಕ್ಕಾಧಿಕಾರಿಗಳು, ಜಿಲ್ಲಾ ಪಂಚಾಯತ್, ಬೆಂಗಳೂರು (ನ), ಚಾಮರಾಜನಗರ, ಚಿಕ್ಕಬಳ್ಳಾಪುರ, ಚಿತ್ರದುರ್ಗ, ಗದಗ, ಹಾವೇರಿ, ಕೋಲಾರ ಹಾಗೂ ಕೊಪ್ಪಳ ಜಿಲ್ಲೆಗಳು
17. ಅಧೀಕ್ಷಕ ಅಭಿಯಂತರರು, ಗ್ರಾ.ಕು.ನೀ.&.ನೈ. ವೃತ್ತ, 4 ವೃತ್ತ ಕಛೇರಿಗಳು
18. ಕಾರ್ಯಪಾಲಕ ಅಭಿಯಂತರರು, ಗ್ರಾ.ಕು.ನೀ.&.ನೈ. ವಿಭಾಗ, ಬೆಂಗಳೂರು (ನ), ಚಾಮರಾಜನಗರ, ಚಿಕ್ಕಬಳ್ಳಾಪುರ, ಚಿತ್ರದುರ್ಗ, ಗದಗ, ಹಾವೇರಿ, ಕೋಲಾರ ಹಾಗೂ ಕೊಪ್ಪಳ ವಿಭಾಗ ಕಛೇರಿಗಳು (ವಿಭಾಗ ಕಛೇರಿಗಳ ಮುಖಾಂತರ ರಾಜ್ಯದ ಉಪ ವಿಭಾಗ ಕಛೇರಿಗಳಿಗೆ)
19. ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ (ಪಂ.ರಾಜ್) ಇವರ ಆಪ್ತ ಕಾರ್ಯದರ್ಶಿಗಳು.
20. ಆಯುಕ್ತರು, RDW&SD ಮತ್ತು ಪದನಿಮಿತ್ತ ಸರ್ಕಾರದ ಅಪರ ಕಾರ್ಯದರ್ಶಿ ಇವರ ಆಪ್ತ ಸಹಾಯಕರಿಗೆ.
21. ಮ್ಯಾನೇಜರ್, ಸಿಂಡಿಕೇಟ್ ಬ್ಯಾಂಕ್, BWSSB ಶಾಖೆ, ರಾಜಧೂತ್ ಕಾಂಪ್ಲೆಕ್ಸ್, ಅವೆನ್ಯೂ ರಸ್ತೆ, ಬೆಂಗಳೂರು.
22. ಆಂತರಿಕ ಆರ್ಥಿಕ ಸಲಹೆಗಾರರು, RDPR ಇಲಾಖೆ ಇವರ ಆಪ್ತ ಸಹಾಯಕರು.
23. ಮುಖ್ಯ ಸಂಪಾದಕರು ಮತ್ತು ಸಂಪರ್ಕಾಧಿಕಾರಿ "ಕರ್ನಾಟಕ ವಿಕಾಸ" ಗ್ರಾ.ಅ.ಪಂ.ರಾಜ್ ಇಲಾಖೆ, ಬೆಂಗಳೂರು.
24. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾಅಪಂ.ರಾಜ್ ಇಲಾಖೆ (ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು).
25. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ).
26. ಗ್ರಾಅಪಂ.ರಾಜ್ ಇಲಾಖೆಯ ಮಾಹಿತಿ ಕೇಂದ್ರ (10 ಪ್ರತಿಗಳು).
27. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

ಅನುಬಂಧ

ಸರ್ಕಾರದ ಆದೇಶ ಸಂ.ಗ್ರಾಅಪ/48/ಗ್ರಾಕುನೀ&ನೈಇ/ಲೆಶಾ/2018–19, ಬೆಂಗಳೂರು, ದಿನಾಂಕ 18–05–2018 ರ ಲಗತ್ತು

2018–19ನೇ ಸಾಲಿನಲ್ಲಿ ರಾಷ್ಟ್ರೀಯ ಗ್ರಾಮೀಣ ಕುಡಿಯುವ ನೀರು ಯೋಜನೆಯ ರಾಜ್ಯ ವಲಯದಡಿ ಸಿ.&.ಕ್ಯೂ. – ಎಸ್.ಡಿ.ಪಿ. ಘಟಕದಡಿ ಬಿಡುಗಡೆ ಮಾಡಲಾದ ಅನುದಾನ

(ರೂ. ಲಕ್ಷಗಳಲ್ಲಿ)

| ಕ್ರ. ಸಂ | ಜಿಲ್ಲೆ | ತಾಲ್ಲೂಕು | ಬಿಡುಗಡೆ ಮಾಡಲಾದ ಅನುದಾನ |
|---|---|---|---|
| 1 | ಬೆಂಗಳೂರು(ನ) | ಆನೇಕಲ್ | 10.00 |
| | | ಒಟ್ಟು | **10.00** |
| 2 | ಚಾಮರಾಜನಗರ | ಚಾಮರಾಜನಗರ | 70.00 |
| | | ಗುಂಡ್ಲುಪೇಟೆ | 10.00 |
| | | ಕೊಳ್ಳೇಗಾಲ | 25.00 |
| | | ಒಟ್ಟು | **105.00** |
| 3 | ಚಿಕ್ಕಬಳ್ಳಾಪುರ | ಚಿಂತಾಮಣಿ | 1.00 |
| | | ಗೌರಿಬಿದನೂರು | 2.00 |
| | | ಬಾಗೇಪಲ್ಲಿ | 97.00 |
| | | ಗುಡಿಬಂಡೆ | 56.00 |
| | | ಒಟ್ಟು | **156.00** |
| 4 | ಚಿತ್ರದುರ್ಗ | ಮಳಕಾಲ್ಮೂರು | 79.77 |
| | | ಹೊಸದುರ್ಗ | 31.49 |
| | | ಹಿರಿಯೂರು | 66.39 |
| | | ಚೆಳ್ಳಕೆರೆ | 93.45 |
| | | ಹೊಳಲ್ಕೆರೆ | 28.90 |
| | | ಒಟ್ಟು | **300.00** |
| 5 | ಗದಗ | ಮುಂಡರಗಿ | 60.00 |
| | | ರೋಣ | 60.00 |
| | | ಶಿರಹಟ್ಟಿ | 80.00 |
| | | ಒಟ್ಟು | **200.00** |
| 6 | ಹಾವೇರಿ | ಬ್ಯಾಡಗಿ | 40.00 |
| | | ಹಾನಗಲ್ | 50.00 |
| | | ಹಾವೇರಿ | 20.00 |
| | | ಹಿರೇಕೇರೂರ್ | 60.00 |
| | | ಸವನೂರು | 65.00 |
| | | ಶಿಗ್ಗಾವ್ | 70.00 |
| | | ಒಟ್ಟು | **305.00** |
| 7 | ಕೋಲಾರ | ಬಂಗಾರಪೇಟೆ | 32.00 |
| | | ಮಾಲೂರು | 30.00 |
| | | ಶ್ರೀನಿವಾಸ ಪುರ | 15.00 |
| | | ಮುಳುಬಾಗಿಲು | 3.00 |
| | | ಒಟ್ಟು | **80.00** |
| 8 | ಕೊಪ್ಪಳ | ಕುಷ್ಟಗಿ | 100.00 |
| | | ಕೊಪ್ಪಳ | 100.00 |
| | | ಯಲ್ಬುರ್ಗ | 100.00 |
| | | ಒಟ್ಟು | **300.00** |
| | ಒಟ್ಟಾರೆ | | **1456.00** |

19/05

ಆಯುಕ್ತರು ಹಾಗೂ
ಸರ್ಕಾರದ ಪದನಿಮಿತ್ತ ಕಾರ್ಯದರ್ಶಿ,
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ.

18/05